# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** : 1072

**ಸದಸ್ಯರ ಹೆಸರು** : ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)

**ಉತ್ತರಿಸುವ ದಿನಾಂಕ** : 12.03.2026

**ಉತ್ತರಿಸುವ ಸಚಿವರು** : ಮಾನ್ಯ ಮುಖ್ಯಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬ್ಯಾಂಕ್ ಖಾತೆಯನ್ನು ಹೊಸದಾಗಿ ತೆರೆಯಲು ಆರ್ಥಿಕ ಇಲಾಖೆಯಿಂದ ನಿರ್ದೇಶನಗಳನ್ನು ನೀಡಲಾಗಿದೆಯೇ; ನೀಡಿದ್ದಲ್ಲಿ, ಇಲಾಖಾವಾರು ಅದೇ ನಿರ್ದೇಶನವನ್ನು ಪಾಲನೆ ಮಾಡುತ್ತಿದ್ದಾರೆಯೇ; ಪಾಲನೆ ಮಾಡದಿದ್ದಲ್ಲಿ, ಸದರಿಯವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; (ಸಂಪೂರ್ಣವಾದ ಮಾಹಿತಿ ನೀಡುವುದು) | ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಬರುವ ನಿರ್ದೇಶನಾಲಯ/ಮಂಡಳಿ/ ಪ್ರಾಧಿಕಾರ/ ಶಾಖೆಗಳಿಗೆ ಸಂಬಂಧಿಸಿದಂತೆ ಮಾಹಿತಿ ಈ ಕೆಳಗಿನಂತಿದೆ.<br><br>ಎಡಿಬಿ ವಿಭಾಗದ ಮಂಡಳಿಗಳಾದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಕರಾವಳಿ ಅಭಿವೃದ್ಧಿ ಮಂಡಳಿ ಹಾಗೂ ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರಗಳು ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಬ್ಯಾಂಕ್ ಖಾತೆಯನ್ನು ತೆರೆದಿರುತ್ತಾರೆ.<br><br>ಕರ್ನಾಟಕ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಪ್ರಾಧಿಕಾರ: ಹೌದು, ಆರ್ಥಿಕ ಇಲಾಖೆಯ ಆದೇಶ/ನಿರ್ದೇಶನ ಪಾಲನೆ ಮಾಡಲಾಗುತ್ತದೆ.<br><br>ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ: ಬ್ಯಾಂಕ್ ಖಾತೆಯನ್ನು ಹೊಸದಾಗಿ ತೆರೆಯಲು ಆರ್ಥಿಕ ಇಲಾಖೆಯಿಂದ ನೀಡಲಾದ ನಿರ್ದೇಶನಗಳನ್ನು ಪಾಲನೆ ಮಾಡಲಾಗಿರುತ್ತದೆ. |
| (ಆ) | ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ/05/ಟಿ.ಎ.ಆರ್/2017, ದಿನಾಂಕ: 30.01.2017 ರ ಪ್ರಕಾರ ಎಷ್ಟು ಇಲಾಖೆಗಳು, ಸ್ಥಳೀಯ ಸಂಸ್ಥೆಗಳು (ಆರ್.ಡಿ.ಪಿ.ಆರ್ ಮತ್ತು ನಗರ ಸ್ಥಳೀಯ ಸಂಸ್ಥೆಗಳು), ಪ್ರಾಧಿಕಾರಗಳು, ಮಂಡಳಿಗಳು, ನಿಗಮಗಳು, ಸೊಸೈಟಿಗಳು ದಿನಾಂಕ:30.01.2017 ನಂತರ ತೆರೆಯಲಾಗಿರುವ ಬ್ಯಾಂಕ್ ಖಾತೆಗಳಿಗೆ ಆರ್ಥಿಕ ಇಲಾಖೆಯ ಸಮ್ಮತಿ/ ಅನುಮೋದನೆಯನ್ನು ಪಡೆಯಲಾಗಿದೆಯೇ; ಪಡೆದಿದ್ದಲ್ಲಿ ಸಂಪೂರ್ಣವಾದ ಮಾಹಿತಿಯನ್ನು ನೀಡುವುದು. | ಎಡಿಬಿ ವಿಭಾಗದ ಮಂಡಳಿಗಳಾದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಕರಾವಳಿ ಅಭಿವೃದ್ಧಿ ಮಂಡಳಿ ಹಾಗೂ ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರ: ಹೌದು.<br><br>ಕರ್ನಾಟಕ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಪ್ರಾಧಿಕಾರ: 2017ರ ನಂತರ ಕರ್ನಾಟಕ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಪ್ರಾಧಿಕಾರದಲ್ಲಿ ಯಾವುದೇ ಬ್ಯಾಂಕ್ ಖಾತೆಯನ್ನು ತೆರೆದಿರುವುದಿಲ್ಲ.<br><br>ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ: ಸದರಿ ಆದೇಶಕ್ಕೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದು ತೆರೆಯಬೇಕಾಗಿರುವಂತಹ ಖಾತೆಗಳು ಯಾವುದೂ ಇರುವುದಿಲ್ಲ. |

| | | |
|---|---|---|
| (ಇ) | ಸದರಿ ಸರ್ಕಾರದ ಆದೇಶದ ಪ್ರಕಾರ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರಗಳ ಇಲಾಖೆಯ ಪ್ರಧಾನ ವ್ಯವಸ್ಥಾಪಕರಿಗೆ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆಗಳ ಅಂಕಿ ಅಂಶಗಳನ್ನೊಳಗೊಂಡ ಮಾಹಿತಿಯನ್ನು ಒಂದು ತಿಂಗಳೊಳಗೆ ರಾಜ್ಯ ಸರ್ಕಾರದ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು (ಆರ್.ಡಿ.ಪಿ.ಆರ್ ಮತ್ತು ನಗರ ಸ್ಥಳೀಯ ಸಂಸ್ಥೆಗಳು), ಪ್ರಾಧಿಕಾರಗಳು, ಮಂಡಳಿಗಳು, ನಿಗಮಗಳು, ಸೊಸೈಟಿಗಳು ನೀಡಲು ಸೂಚಿಸಲಾಗಿತ್ತು; ಸದರಿ ಆದೇಶದನ್ವಯ ಮಾಹಿತಿಯನ್ನು ಒದಗಿಸಲಾಗಿದೆಯೇ; (ಅಂಕಿ ಅಂಶಗಳನ್ನೊಳಗೊಂಡ ಮಾಹಿತಿಯನ್ನು ಒದಗಿಸುವುದು) | ಎಡಿಬಿ ವಿಭಾಗದ ಮಂಡಳಿಗಳಾದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಕರಾವಳಿ ಅಭಿವೃದ್ಧಿ ಮಂಡಳಿ ಹಾಗೂ ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರ: ಯೋಜನಾ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮಂಡಳಿ/ಪ್ರಾಧಿಕಾರಗಳು ಸ್ಥಳೀಯ ಲೆಕ್ಕಪರಿಶೋಧನ ನಡೆಸಿ ವರದಿಗಳನ್ನು ವಿಧಾನಮಂಡಲಕ್ಕೆ ನೀಡಲಾಗುತ್ತಿದೆ. ಲೆಕ್ಕಪರಿಶೋಧನಾ ವರದಿಯಲ್ಲಿ ಕಂಡುಬರುವ ಆಕ್ಷೇಪಣೆ ಮತ್ತು ವಸೂಲಾತಿ ಕಂಡಿಕೆಗಳು ಹಾಗೂ ಆಕ್ಷೇಪ ಮತ್ತು ವಸೂಲಾತಿ ಮೊತ್ತಗಳ ಬಗ್ಗೆ ಮಂಡಳಿಗಳ ಹಂತದಲ್ಲಿ ಲೆಕ್ಕಪತ್ರ ಸಮಿತಿಗಳನ್ನು ರಚಿಸಿ ಆಕ್ಷೇಪಣೆ ವಸೂಲಾತಿ ಕಂಡಿಕೆಗಳನ್ನು ಇತ್ಯರ್ಥ ಪಡಿಸಿ ವರದಿಯನ್ನು ಕಾಗದ ಪತ್ರಗಳ ಸಮಿತಿಗೆ ಸಲ್ಲಿಸಲಾಗುತ್ತಿದೆ ಹಾಗೂ ಸದರಿ ಸಮಿತಿ ನೀಡುವ ಸೂಚನೆಗಳನ್ನು ಮಂಡಳಿಗಳು ಹಾಗೂ ಪ್ರಾಧಿಕಾರ ಪಾಲಿಸುತ್ತಿವೆ.<br><br>ಕರ್ನಾಟಕ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಪ್ರಾಧಿಕಾರ: ಅನ್ವಯಿಸುವುದಿಲ್ಲ.<br><br>ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ: ಅನ್ವಯಿಸುವುದಿಲ್ಲ. |

DB 11/03/2026

[ಎನ್. ರಾಜೇಶ್ವರಿ]
ಸರ್ಕಾರದ ಅಧೀನ ಕಾರ್ಯದರ್ಶಿ-1&2
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

11/3/26